# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 610(524) |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21-02-2023 |
| ಉತ್ತರಿಸುವ ಸಚಿವರು | : | ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬೀದಿ ದೀಪಗಳ ವೈಜ್ಞಾನಿಕ ನಿರ್ವಹಣೆ ಇಲ್ಲದೇ ದಿನದ 24 ಘಂಟೆಯು ಉರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ವಿದ್ಯುತ್ ಅನವಶ್ಯಕ ಪೋಲಾಗುತ್ತಿದ್ದು ಇದನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರವು ಕ್ರಮವಹಿಸುವುದೇ? (ವಿವರ ನೀಡುವುದು) | ಆದಾಗ್ಯೂ, ವಿದ್ಯುತ್ ಪೋಲಾಗುವುದನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>• ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಬೀದಿ ದೀಪಗಳ ನಿರ್ವಹಣೆಗಾಗಿ ವಾರ್ಷಿಕ ಟೆಂಡರ್ ಕರೆಯಲಾಗುತ್ತಿದೆ. ಸದರಿ ಟೆಂಡರ್‌ಗಳ ಅನುಸಾರ ಗುತ್ತಿಗೆದಾರರು ಬೀದಿ ದೀಪಗಳ ಚಾಲನೆ(Switch on- Switch off) ಹಾಗೂ ನಿರ್ವಹಣೆಯನ್ನು ಕೈಗೊಳ್ಳಬೇಕಾಗಿರುತ್ತದೆ. ಬೀದಿ ದೀಪಗಳ ಕುರಿತು ಸಾರ್ವಜನಿಕ ದೂರುಗಳು ಸ್ವೀಕೃತವಾದಲ್ಲಿ 24 ಗಂಟೆಗಳೊಳಗೆ ದುರಸ್ತಿ ಕಾರ್ಯವನ್ನು ಸದರಿ ಗುತ್ತಿಗೆದಾರರು ಕೈಗೊಳ್ಳಬೇಕಾಗಿರುತ್ತದೆ ಇಲ್ಲವಾದಲ್ಲಿ ದಂಡ ವಿಧಿಸಲಾಗುತ್ತದೆ.<br>• ಮುಂದುವರೆದು ಹಾಲಿ ಇರುವ ಬೀದಿ ದೀಪಗಳನ್ನು ಬದಲಿಸಿ ಎಲ್.ಇ.ಡಿ ಬೀದಿ ದೀಪಗಳನ್ನು ಅಳವಡಿಸುವ ಹಾಗೂ ಗಣಕೀಕೃತ ನಿರ್ವಹಣೆಯನ್ನು ಕೈಗೊಳ್ಳುವ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ:ನಅಇ 550 ಪಿಆರ್‌ಜೆ 2017 ದಿನಾಂಕ:15-03-2018ರ ಅನುಸಾರ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಪಿಪಿಪಿ ಮಾದರಿಯಲ್ಲಿ ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. ಸದರಿ ಯೋಜನೆಯ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ.<br>∘ Automatic switch on and off of street lights based on Astronomical timings.<br>∘ Real time online monitoring and operation of street lights.<br>∘ Online grievance redressal system which integrates call centre complaints.<br>∘ Real time measurement of electricity consumption. |

ಸಂಖ್ಯೆ:ನಅಇ 26 ಸಿಎಸ್‌ಎಸ್ 2023

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು